## 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

**ಸಿ.ಸಿ. ಸಂಃ 57/2020**

| | | |
|---|---|---|
| ಸಾಕ್ಷಿಯ ಹೆಸರುಃ | ಅಲ್ತಾಫ್ ಪಾಷ | ಫ್ರಾಸಾಃಃ 2 |
| ತಂದೆ ಹೆಸರುಃ | ಗೌಸ್ ಪೀರ್ ಸಾಬ್ | ಚಾಸಾಃಃ 2 |
| ವಯಸ್ಸುಃ | 58 ವರ್ಷ | ಪ್ರಮಾಣೀಕರಿಸಿದ<br>ದಿಃ 23/03/2026 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಹಲಗನ ಹಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತರ ಪರಿಚಯವಿದೆ. ಚಾಸಾ-1 ನನ್ನ ಮಗ. ನನಗೆ ಚಾಸಾ-3 ರಿಂದ 6 ರವರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಆರೋಪಿತರು ಯಾವತ್ತೂ ಸಹ ಚಾಸಾ-1 ರವರೊಂದಿಗೆ ಜಗಳ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಕಬ್ಬಿಣದ ರಾಡಿನಿಂದ ಹಲ್ಲೆ ಮಾಡಿ ಗಾಯ ಉಂಟು ಮಾಡಿರುವುದಿಲ್ಲ. ಯಾವುದೇ ನಷ್ಟ ಉಂಟು ಮಾಡಿರುವುದಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿರುವುದಿಲ್ಲ. ಈ ಸಂಬಂಧ ನಾನು ಆರೋಪಿತರ ವಿರುದ್ಧ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಪೊಲೀಸ್‌ರು ಸ್ಥಳಕ್ಕೆ ಬಂದು ನನ್ನ ಸಮಕ್ಷಮ ಯಾವುದೇ ಮಹಜರು ಕ್ರಮ ಜರುಗಿಸಿ ಸ್ಥಳ ದಿಂದ ಕಬ್ಬಿಣದ ರಾಡನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯು ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.2** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.2(ಎ)** ಎಂದು ಗುರುತಿಸಲಾಯಿತು.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ದಿಃ 17.09.2019 ರಂದು ಮ. 12.30 ಗಂಟೆ ಸಮಯದಲ್ಲಿ ಹಲಗನಹಳ್ಳಿ ಗ್ರಾಮದ ಚಾಸಾ-5 ರವರ ಸ. ನಂ. 117/2 ರ ಜಮೀನಿನಲ್ಲಿ 1 ಮತ್ತು 2 ನೇ ಆರೋಪಿತರು ತಮ್ಮ ಬಾಬ್ತು ಕೆಎ-45-ಟಿಎ-3311 ಟ್ರ್ಯಾಕ್ಟರ್ ಅನ್ನು ಚಾಲನೆ ಮಾಡಿಕೊಂಡು ಬರುತ್ತಿದ್ದಾಗ ಚಾಸಾ-1 ಟ್ರ್ಯಾಕ್ಟರ್ ಅನ್ನು ನಿಲ್ಲಿಸಿ ಏಕೆ ಈ ರೀತಿ ರಾಗಿ ಬಿತ್ತನೆ ಮಾಡಿದ ಜಮೀನಿನ ಮೇಲೆ ಟ್ರ್ಯಾಕ್ಟರ್ ಅನ್ನು ಓಡಿಸಿಕೊಂಡು ಬರುತ್ತಿದ್ದೀರಾ ಎಂದು ಕೇಳಿದಾಗ 1 ನೇ ಆರೋಪಿತ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 1 ನೇ ಆರೋಪಿತ ಟ್ರ್ಯಾಕ್ಟರ್ ಅನ್ನು ಚಾಸಾ-1 ರವರಿಗೆ ತಾಗಿಸಿ ಕೆಳಗೆ ಬೀಳಿಸಿ ಒಂದು ಕಬ್ಬಿಣದ ರಾಡಿನಿಂದ ಚಾಸಾ-1 ರವರ ಎಡ ಬುಜ, ಎಡಕೈ ತೋಳು ಮತ್ತು ಎದೆ ಮತ್ತು ಎಡ ಮುಂಗೈಗೆ ಬಲವಾಗಿ ಹೊಡೆದು ಗಾಯ ಪಡಿಸಿದರು ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಟ್ರ್ಯಾಕ್ಟರ್ ಅನ್ನು ಬಿತ್ತನೆ ಮಾಡಿರುವ ಜಮೀನಿನ ಮೇಲೆ ಓಡಾಡಿಸಿ ಸುಮಾರು 800 ಬೆಳೆ ನಷ್ಟ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಏಟಾಗಿದ್ದ ಚಾಸಾ-1 ರವರನ್ನು ನಾನು ಮತ್ತು ಚಾಸಾ-3 ರವರು ಮನೆ ಬಳಿಗೆ ಕರೆದುಕೊಂಡು ಹೋದಾಗ 2 ನೇ ಆರೋಪಿತ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಸಂಬಂಧ ಚಾಸಾ-1 ರವರನ್ನು ಮೈಸೂರಿನ ಕೆ ಆರ್ ಆಸ್ಪತ್ರೆ ಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಪೊಲೀಸ್‌ರು ಚಾಸಾ-1 ರವರ ಹೇಳಿಕೆ ದೂರನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಈ ಬಗ್ಗೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು

**ನಿಪಿ–3** ಎಂದು ಗುರುತಿಸಲಾಯಿತು. ದಿಃ 18.09.2019 ರಂದು ಪೊಲೀಸ್‌ರು ಸ್ಥಳ ಕ್ಕೆ ಬಂದು ನನ್ನ ಮತ್ತು ಚಾಸಾ–7 ಮತ್ತು 8 ರವರ ಸಮಕ್ಷಮ ಮ. 2.00 ರಿಂದ 3.00 ರವರೆಗೆ ಸ್ಥಳ ಮಹಜರು ಜರುಗಿಸಿ ಸ್ಥಳದಿಂದ ಕಬ್ಬಿಣದ ರಾಡನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ನಾನು ಆರೋಪಿತರೊಂದಿಗೆ ರಾಜೀ ಮಾಡಿಕೊಂಡಿರುತ್ತೇನೆ ಎಂದರೆ ಸರಿ. ಆದ್ದರಿಂದ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**1 ನೇ ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**